**JULY 21, 2024**

# AKASHAVANI - DHARWAD

# PRADESH SAMACHARA (KANNADA) 7:05 AM

**ಮುಖ್ಯಾಂಶಗಳು:**

- **ಪ್ರವಾಹ ಸಂತ್ರಸ್ತ ಪ್ರದೇಶಗಳ ಪರಿಹಾರ ಕಾರ್ಯಗಳಿಗೆ 775 ಕೋಟಿ ರೂಪಾಯಿ ಒದಗಿಸಲಾಗಿದೆ– ಮುಖ್ಯಮಂತ್ರಿ ಸಿದ್ದರಾಮಯ್ಯ.**

- **ಬಗರ್ ಹುಕುಂ ಭೂಮಿಯ ಹಕ್ಕನ್ನು ರೈತರಿಗೆ ನೀಡಲಾಗುವುದು – ಸಚಿವ ಎನ್.ಚಲುವರಾಯಸ್ವಾಮಿ.**

- **ಬೆಂಗಳೂರು ನಗರದಲ್ಲಿ ಡೆಂಗ್ಯೂ ಪ್ರಕರಣಗಳ ನಿಯಂತ್ರಣಕ್ಕೆ ನೂತನ ಕ್ರಮ – ಸಚಿವ ದಿನೇಶ್ ಗುಂಡೂರಾವ್.**

- **ದೇಶದಲ್ಲಿ ಹಸಿರು ಇಂಧನ ಗುರಿ ಸಾಧನೆಗೆ ಕೇಂದ್ರ ಸರ್ಕಾರದಿಂದ ಹಲವು ಹೊಸ ಕಾರ್ಯಯೋಜನೆಗಳು– ಕೇಂದ್ರ ಸಚಿವ ಪ್ರಲ್ಹಾದ ಜೋಶಿ.**

**ವಾರ್ತೆಗಳ ವಿವರ…**

<><><>

**ವಿದ್ಯಾರ್ಥಿಗಳ ಮಾನಸಿಕ ಆರೋಗ್ಯ ಮತ್ತು ಉತ್ತಮ ಶಿಕ್ಷಣಕ್ಕೆ ಗುಣಮಟ್ಟದ ಆಹಾರ** ನೀಡುವುದು ಅತ್ಯಂತ ಅಗತ್ಯ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಹೇಳಿದ್ದಾರೆ. ಬೆಂಗಳೂರಿನಲ್ಲಿ ನಿನ್ನೆ ಸರ್ಕಾರ ಹಾಗೂ ಅಜೀಂಪ್ರೇಮ್ ಜಿ ಫೌಂಡೇ ’ನ್ ಸಹಭಾಗಿತ್ವದಲ್ಲಿ ಸರ್ಕಾರಿ, ಅನುದಾನಿತ ಪ್ರಾಥಮಿಕ ಮತ್ತು ಪ್ರೌಢಶಾಲಾ ಮಕ್ಕಳಿಗೆ ವಾರದಲ್ಲಿ ಉಚಿತವಾಗಿ 6 ದಿನಗಳ ಕಾಲ 1 ಸಾವಿರದ 500 ಕೋಟಿ ರೂಪಾಯಿ ವೆಚ್ಚದಲ್ಲಿ ಪೂರಕ ಪೌಷ್ಠಿಕ ಆಹಾರ ನೀಡುವ ಕಾರ್ಯಕ್ರಮ ಉದ್ಘಾಟಿಸಿ ಮಾತನಾಡಿದ ಅವರು, ಸರ್ಕಾರಿ ಶಾಲಾ ಮಕ್ಕಳಿಗೆ ಅಜೀಂ ಪ್ರೇಮ್ ಜಿ ಫೌಂಡೇ ’ನ್; ವಾರದಲ್ಲಿ ನಾಲ್ಕು ದಿನವೂ ಮೊಟ್ಟೆ ನೀಡಲು ಮತ್ತು ಪೂರಕ ಪೌಷ್ಠಿಕ ಆಹಾರ ಒದಗಿಸುವ ಪುಣ್ಯದ ಕಾರ್ಯಕ್ಕೆ ಸರ್ಕಾರದ ಜೊತೆಗೆ ಕೈಜೋಡಿಸಿದೆ. ವೈಜ್ಞಾನಿಕವಾಗಿ, ವೈಚಾರಿಕವಾಗಿ ವಿದ್ಯಾರ್ಥಿಗಳು ವಿಕಾಸ ಹೊಂದಿದಾಗ ಮಾತ್ರ ಸಮಾಜಮುಖಿಯಾಗಲು ಸಾಧ್ಯ ಎಂದು ಹೇಳಿದರು. ನಂತರ ಸುದ್ದಿಗಾರರೊಂದಿಗೆ ಮಾತನಾಡಿದ

ಸಿದ್ದರಾಮಯ್ಯ; ವ್ಯಾಪಕ ಮಳೆಯಿಂದಾಗಿ ಉಂಟಾಗಿರುವ ಪ್ರವಾಹ ಪರಿಸ್ಥಿತಿಯನ್ನು ನಿಭಾಯಿಸಲು ಸೂಕ್ತ ಕ್ರಮಗಳನ್ನು ಕೈಗೊಳ್ಳುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಲಾಗಿದೆ. ಪರಿಹಾರ ಕಾರ್ಯ ಚುರುಕುಗೊಳಿಸುವಂತೆ ಸೂಚಿಸಿದ್ದು, ಉತ್ತರಕನ್ನಡ ಜಿಲ್ಲೆಯ ಅಂಕೋಲಾದಲ್ಲಿ ಗುಡ್ಡ ಕುಸಿತದಿಂದ ಉಂಟಾಗಿರುವ ಹಾನಿ ಪರಿಶೀಲಿಸಲು ಅಂಕೋಲಾಗೆ ಭೇಟಿ ನೀಡುವುದಾಗಿ ತಿಳಿಸಿದರು. ಪ್ರವಾಹ ಸಂತ್ರಸ್ತ ಪ್ರದೇಶಗಳ ಜನರ ಪುನರ್‌ವಸತಿ ಹಾಗೂ ಪರಿಹಾರ ಕಾರ್ಯಗಳಿಗೆ ರಾಜ್ಯ ಸರ್ಕಾರ 775 ಕೋಟಿ ರೂಪಾಯಿ ಹಣ ನೀಡಿದ್ದು, ಅಗತ್ಯವಿದ್ದಲ್ಲಿ ಮತ್ತ ್ಟ ನೆರವು ಒದಗಿಸಲಾಗುವುದು ಎಂದು ಸಿದ್ದರಾಮಯ್ಯ ತಿಳಿಸಿದರು.

<><><>

**ಉತ್ತರ ಕನ್ನಡ ಜಿಲ್ಲೆಯ ಅಂಕೋಲಾ ತಾಲೂಕಿನ ಶಿರೂರಿನಲ್ಲಿ ನಡೆದ** ಗುಡ್ಡ ಕುಸಿತ ದುರಂತ ಸಂಭವಿಸಿದ ಸ್ಥಳಕ್ಕೆ ಕೇಂದ್ರ ಸಚಿವ ಎಚ್.ಡಿ.ಕುಮಾರಸ್ವಾಮಿ ಭೇಟಿ ನೀಡಿ ಪರಿಶೀಲನೆ ನಡೆಸಿದರು. ಈ ಸಂದರ್ಭದಲ್ಲಿ ಮಾತನಾಡಿದ ಅವರು ಘಟನೆಯ ಕುರಿತು ಅಧಿಕಾರಿಗಳಿಂದ ಮಾಹಿತಿ ಪಡೆದಿದ್ದೇನೆ. ಒಂದೇ ಕುಟುಂಬದ ಐವರು ಪ್ರಾಣ ಕಳೆದುಕೊಂಡಿರುವುದು ದುರಂತ. ಇನ್ನ ್ಟ ದುರಂತ ನಡೆಯದಂತೆ ಮುನ್ನೆಚ್ಚರಿಕೆ ಕೈಗೊಳ್ಳಲು ಅಧಿಕಾರಿಗಳಿಗೆ ಸೂಚಿಸಿದ್ದೇನೆ. ಇಂಥ ದುರ್ಘಟನೆ ನಡೆದ ಸಂದರ್ಭದಲ್ಲಿ ರಾಜಕೀಯ ಆರೋಪ ಪ್ರತ್ಯಾರೋಪ ಮಾಡುವ ಬದಲು ಎಲ್ಲರೂ ಒಂದಾಗಿ ನೊಂದವರ ಜೊತೆಗೆ ನಿಲ್ಲಬೇಕಿದೆ ಎಂದರು. ಇನ್ನು ನೊಂದವರಿಗೆ ಕೇಂದ್ರದಿಂದ ಯಾವ ರೀತಿಯಲ್ಲಿ ಪರಿಹಾರ ಒದಗಿಸಲು ಸಾಧ್ಯವಿದೆ ಎನ್ನುವ ಕುರಿತು ಪ್ರಧಾನ ಮಂತ್ರಿಗಳೊಂದಿಗೆ ಚರ್ಚೆ ನಡೆಸುವುದಾಗಿ ಅವರು ತಿಳಿಸಿದರು.

<><><>

**ಅಂಕೋಲಾ ತಾಲ್ಲೂಕಿನ ಶಿರೂರಿನಲ್ಲಿ ಗುಡ್ಡ** ಕುಸಿದ ಸ್ಥಳದಲ್ಲಿ ಮಣ್ಣಿನಡಿ ಸಿಲುಕಿದ ಲಾರಿ, ನೀರಿನಲ್ಲಿ ಕಣ್ಮರೆಯಾದವರ ಪತ್ತೆಗೆ ಶೋಧ ಕಾರ್ಯ ಚುರುಕುಗೊಂಡಿದೆ. ಮಣ್ಣಿನಡಿ ಸಿಲುಕಿದ ಲಾರಿ ಪತ್ತೆಗೆ ರಡಾರ್ ತರಿಸಲಾಗಿದೆ. ಲೋಹ ಪರಿಶೋಧಕ ಯಂತ್ರದ ಮೂಲಕವೂ ಪತ್ತೆ ಕಾರ್ಯ ನಡೆದಿದೆ.

<><><>

**ಈ ಮಧ್ಯೆ; ಸ್ಥಳಕ್ಕೆ ಭೇಟಿ ನೀಡಿದ** ಮೀನುಗಾರಿಕೆ, ಬಂದರು ಹಾಗೂ ಒಳನಾಡು ಜಲಸಾರಿಗೆ ಖಾತೆ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಮಂಕಾಳ ವೈದ್ಯ; ಉಳುವರೆ ಗ್ರಾಮದ ಮೀನುಗಾರರ ಕುಟುಂಬಗಳ 59 ಜನರಿಗೆ ತಲಾ 25 ಸಾವಿರ ರೂಪಾಯಿಗಳ ಪರಿಹಾರಧನವನ್ನು ನಿನ್ನೆ ವಿತರಿಸಿದರು. ಗುಡ್ಡಕುಸಿತದಿಂದ ಹಾನಿಯಾದ ಉಳುವರೆ ಗ್ರಾಮದ ಮೀನುಗಾರರಿಗೆ ಸರ್ಕಾರದ ವತಿಯಿಂದ ಎಲ್ಲಾ ಅಗತ್ಯ ನೆರವು ಒದಗಿಸಲು ಬದ್ಧವಾಗಿದ್ದು, ಈಗಾಗಲೇ ಇಲ್ಲಿನ ಜನರಿಗೆ ಅಗತ್ಯ ನಿವೇಶನ ನೀಡಲು ಸ್ಥಳ ಗುರುತಿಸುವಂತೆ ಜಿಲ್ಲಾಡಳಿತಕ್ಕೆ ಸೂಚನೆ ನೀಡಲಾಗಿದೆ ಎಂದರು. ಪ್ರಸ್ತುತ ತುರ್ತುಕ್ರಮವಾಗಿ ಮೀನು ಬಲೆ, ದೋಣಿ ದುರಸ್ತಿ ಮತ್ತಿತರ ಕಾರ್ಯಗಳಿಗಾಗಿ ತಲಾ 25 ಸಾವಿರ ಪರಿಹಾರ ವಿತರಿಸಲಾಗಿದ್ದು, ಈ ಅವಘಡದಲ್ಲಿ ಮನೆ ಕಳೆದುಕೊಂಡವರಿಗೆ 1 ಲಕ್ಷ 20 ಸಾವಿರ ಮತ್ತು ಮೃತಪಟ್ಟಕುಟುಂಬದ ವಾರಿಸುದಾರರಿಗೆ 5 ಲಕ್ಷ ರೂಪಾಯಿಗಳ ಚೆಕ್ ವಿತರಿಸಲಾಗಿದ್ದು, ಮೀನುಗಾರಿಕಾ ಇಲಾಖೆ ವತಿಯಿಂದ ಇನ್ನೂ ಹೆಚ್ಚಿನ ಪರಿಹಾರ ಒದಗಿಸುವ ಬಗ್ಗೆ ಚಿಂತನೆ ನಡೆಸಲಾಗಿದೆ ಎಂದರು. ಈ ಭಾಗದ ಸಂತ್ರಸ್ತರಿಗೆ ಶಾಸಕರು ಮತ್ತು ತಾವು ತಲಾ 10 ಸಾವಿರ ವೈಯಕ್ತಿಕ ನೆರವು ಸಹ ಒದಗಿಸಲಾಗಿದ್ದು, ಇಲ್ಲಿನ ಜನತೆಯ ಸಂಕ ್ಟಕ್ಕೆ ಪಕ್ಷ ಬೇಧ ಮರೆತು ಸದಾ ಸ್ಪಂದಿಸುವುದಾಗಿ ಸಚಿವರು ತಿಳಿಸಿದರು.

<><><>

**ವಿವಿಧ ಜಿಲ್ಲೆಗಳಲ್ಲಿ ಶನಿವಾರ ಮಳೆಯ ಅಬ್ಬರ ತುಸು ತಗ್ಗಿದ್ದು, ಬಹುತೇಕ** ಅಣೆಕಟ್ಟೆಗಳು ಭರ್ತಿಯಾಗುವ ಹಂತ ತಲುಪಿವೆ. ಹೆಚ್ಚಿನ ಪ್ರಮಾಣದಲ್ಲಿ ನೀರು ಹೊರಗೆ ಹರಿಸುತ್ತಿರುವ ಕಾರಣ ಪ್ರಮುಖ ನದಿಗಳ ಪಾತ್ರದಲ್ಲಿ ಪ್ರವಾಹದ ಭೀತಿ ಎದುರಾಗಿದೆ.ವಿಜಯಪುರ ಜಿಲ್ಲೆಯ ಆಲಮಟ್ಟಿ ಹಾಗೂ ಮಂಡ್ಯ ಜಿಲ್ಲೆಯ ಕೆ.ಆರ್.ಎಸ್. ಜಲಾಶಯಗಳಿಂದ ಮುನ್ನೆಚ್ಚರಿಕೆ ಕ್ರಮವಾಗಿ, ನಿನ್ನೆಯಿಂದ ನೀರು ಹೊರಬಿಡಲಾಗುತ್ತಿದೆ. ಚಿಕ್ಕಮಗಳೂರು ಜಿಲ್ಲೆಯ ಭದ್ರಾ ಅಣೆಕಟ್ಟಗೆ ನೀರಿನ ಹರಿವು ಹೆಚ್ಚಿದ್ದು, ನೀರಿನ ಮಟ್ಟ ಒಂದೇ ದಿನ ಐದು ಅಡಿಗಳಷ್ಟು ಏರಿದೆ. ಶಿವಮೊಗ್ಗ ಜಿಲ್ಲೆಯ ಶಿಕಾರಿಪುರ ತಾಲೂಕಿನ ಕಪ್ಪನಹಳ್ಳಿಯಲ್ಲಿ ಮನೆಗೋಡೆ ಕುಸಿದು ನಾಲ್ವರು ಗಾಯಗೊಂಡಿದ್ದಾರೆ. ಚಿಕ್ಕಮಗಳೂರು ಜಿಲ್ಲೆಯಲ್ಲಿ ಮಂಗಳೂರು–ಶೃಂಗೇರಿ ಹೆದ್ದಾರಿಯಲ್ಲಿ ತಡೆಗೋಡೆ ಕುಸಿದು ಸಂಚಾರ ಅಸ್ತವ್ಯಸ್ತವಾಗಿತ್ತು. ಬೆಳಗಾವಿ ಜಿಲ್ಲೆ ನಿಪ್ಪಾಣಿ ತಾಲೂಕಿನ ನಾಲ್ಕು ಸೇತುವೆಗಳು ಹಾಗೂ ಹುಕ್ಕೇರಿ ತಾಲೂಕಿನ 3 ಸೇತುವೆಗಳು ಮುಳುಗಡೆಯಾಗಿವೆ. ಕೊಡಗು ಜಿಲ್ಲೆಯಲ್ಲಿ ನಿನ್ನೆ ಮಳೆ ತುಸು ವಿರಾಮ ನೀಡಿದ್ದರೂ, ಈವರೆಗೆ 13 ಹಾಗೂ ಹಾಸನ ಜಿಲ್ಲೆಯಲ್ಲಿ 135 ಮನೆಗಳಿಗೆ ಹಾನಿಯಾಗಿದೆ. ಉಡುಪಿ ಜಿಲ್ಲೆಯ ಪಡುಬಿದ್ರಿ ಬಳಿ ನಡಿಪಟ್ಣದಲ್ಲಿ ಕಡಲ ಕೊರೆತ ತೀವ್ರಗೊಂಡಿದೆ.

<><><>

**ಒಂದೂವರೆ ದಶಕಕ್ಕಿಂತ ಹೆಚ್ಚು ಕಾಲ ಸಾಗುವಳಿ ಮಾಡಿದ ಬಗರ್ ಹುಕುಂ** ಭೂಮಿಯನ್ನು ಸಕ್ರಮಗೊಳಿಸಿ, ಭೂ ಒಡೆತನದ ಹಕ್ಕನ್ನು ರೈತರಿಗೆ ನೀಡಲಾಗುವುದು ಎಂದು ಕೃಷಿ ಖಾತೆ ಸಚಿವ ಎನ್.ಚಲುವರಾಯಸ್ವಾಮಿ ಹೇಳಿದ್ದಾರೆ. ನಾಗಮಂಗಲ ವಿಧಾನಸಭಾ ಕ್ಷೇತ್ರದ ತಾಲ್ಲೂಕು ಕಚೇರಿಯಲ್ಲಿ ನಡೆದ ಬಗರ್ ಹುಕುಂ ಸಮಿತಿ ಸಭೆಯಲ್ಲಿ ಅಧ್ಯಕ್ಷತೆ ವಹಿಸಿ ಮಾತನಾಡಿದ ಅವರು, ಪ್ರತಿಯೊಬ್ಬ ರೈತನು ಸ್ವಂತ ಭೂಮಿಯಲ್ಲಿ ಶ್ರಮದ ಮೂಲಕ ನೆಮ್ಮದಿಯ ಬದುಕು ಕಟ್ಟಿಕೊಳ್ಳಲಿ ಎಂಬುದು ನಮ್ಮ ಆಶಯವಾಗಿದೆ. ಕೃಷಿಯನ್ನು ಲಾಭದಾಯಕ ಉದ್ಯೋಗವಾಗಿಸುವ ನಿಟ್ಟಿನಲ್ಲಿ ನಮ್ಮ ಸರ್ಕಾರದ ಪ್ರಾಮಾಣಿಕ ಪ್ರಯತ್ನ ನಿರಂತರವಾಗಿರಲಿದೆ ಎಂದು ಹೇಳಿದ್ದಾರೆ.

<><><>

**ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ**

<><><>

**ಬೆಂಗಳೂರು ನಗರದಲ್ಲಿ ಡೆಂಗ್ಯೂ ಪ್ರಕರಣಗಳನ್ನು ಮತ್ತ ್ಟು ನಿಯಂತ್ರಿಸಲು ಈಗ** ನೂತನ ಕ್ರಮವನ್ನು ಕೈಗೊಳ್ಳಲಾಗಿದ್ದು, ಯಾವುದೇ ಪ್ರದೇಶದಲ್ಲಿ 100 ಮೀಟರ್ ವ್ಯಾಪ್ತಿಯಲ್ಲಿ ಎರಡಕ್ಕಿಂತ ಹೆಚ್ಚು ಪ್ರಕರಣಗಳು ಕಂಡುಬಂದರೆ, ಆ ಪ್ರದೇಶವನ್ನು ಹಾಟ್ ಸ್ಪಾಟ್ ಎಂದು ಗುರುತಿಸಲಾಗುತ್ತದೆ ಎಂದು ಆರೋಗ್ಯ ಖಾತೆ ಸಚಿವ ದಿನೇಶ್ ಗುಂಡೂರಾವ್ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಜಾಲತಾಣ ಎಕ್ಸ್ ಮೂಲಕ ಮಾಹಿತಿ ನೀಡಿರುವ ಅವರು, ಹಾಟ್ ಸ್ಪಾಟ್ ಆಗಿ ಗುರುತಿಸಿಕೊಂಡಿರುವ ಪ್ರದೇಶಕ್ಕೆ ಆರೋಗ್ಯ ಅಧಿಕಾರಿಗಳು ಭೇಟಿ ನೀಡಿ ಜ್ವರ ಪರೀಕ್ಷೆ ನಡೆಸಲಾಗುತ್ತದೆ. ಇನ್ನು ಡೆಂಗಿ ನಿಯಂತ್ರಣದಲ್ಲಿ ಸ್ವಚ್ಛತೆ, ಸೊಳ್ಳೆ ನಿವಾರಕಗಳ ಮಹತ್ವದ ಕುರಿತು ಜಾಗೃತಿ ಮೂಡಿಸಿ ಭಿತ್ತಿಪತ್ರವನ್ನು ವಿತರಿಸಲಾಗುತ್ತದೆ. ಡೆಂಗಿ ಕುರಿತು ಯಾವುದೇ ರೀತಿಯ ಆತಂಕ ಬೇಡ, ನಾವೆಲ್ಲರೂ ಒಟ್ಟಾಗಿ ಡೆಂಗಿಯನ್ನು ಎದುರಿಸೋಣ ಎಂದು ಹೇಳಿದ್ದಾರೆ.

<><><>

**ಡೆಂಗ್ಯೂ ಬಂದ ಮೇಲೆ ಚಿಕಿತ್ಸೆ ನೀಡುವುದಕ್ಕಿಂತ ರೋಗ ಬರದಂತೆ ಮುಂಜಾಗ್ರತಾ** ಕ್ರಮ ವಹಿಸುವುದು ಬಹಳ ಮುಖ್ಯ ಈ ನಿಟ್ಟಿನಲ್ಲಿ ಅಧಿಕಾರಿಗಳು ಶ್ರಮ ವಹಿಸಿ ಕೆಲಸ ಮಾಡಬೇಕು ಎಂದು ಸಹಕಾರಿ ಖಾತೆ ಹಾಗೂ ಹಾಸನ ಜಿಲ್ಲಾ ಉಸ್ತುವಾರಿ ಸಚಿವ ಕೆ. ಎನ್ ರಾಜಣ್ಣ ಹೇಳಿದ್ದಾರೆ. ಹಾಸನದಲ್ಲಿ ನಿನ್ನೆ ಕೆ.ಡಿ.ಪಿ ಸಭೆ ಉದ್ದೇಶಿಸಿ ಮಾತನಾಡಿದ ಅವರು, ಗ್ರಾಮ ಪಂಚಾಯಿತಿ ಮಟ್ಟದಲ್ಲಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ನಗರಪ್ರದೇಶದ ಬಡಾವಣೆಗಳಲ್ಲೂ ಸೊಳ್ಳೆಗಳ ಉತ್ಪತ್ತಿ ತಾಣಗಳನ್ನು ನಾಶ ಪಡಿಸಿ ಸ್ವಚ್ಛತೆಗೆ ಹೆಚ್ಚಿನ ಆದ್ಯತೆ ನೀಡಬೇಕು ಎಂದರು. ಡೆಂಗ್ಯೂ ಚಿಕಿತ್ಸೆಗೆ ಯಾರಿಂದಲೂ ಹಣ ವಸೂಲಿ ಮಾಡುವಂತಿಲ್ಲ, ಕೆಲ ದಾಖಲೆಗಳನ್ನು ರೋಗಿಗಳು ಬಿಟ್ಟು ಬಂದಿದ್ದರೂ ವಿನಾಯ್ತಿ ನೀಡಿ ಅವರಿಗೆ ಚಿಕಿತ್ಸೆ ನೀಡಬೇಕು. ತಾಲೂಕು ಆಸ್ಪತ್ರೆಗಳಲ್ಲಿ ಕೂಡ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕು ಎಂದು ಸಲಹೆ ನೀಡಿದರು.

<><><>

**ಸಾರ್ವಜನಿಕರು ಸಮಸ್ಯೆಗಳನ್ನು ಹೊತ್ತು ಪ್ರತಿನಿತ್ಯ ಸರ್ಕಾರಿ ಕಚೇರಿಗಳಿಗೆ** ಅಲೆದಾಡುವುದನ್ನು ತಪ್ಪಿಸಲು ಹಾಗೂ ಜನರ ಬಳಿಗೆ ಸರ್ಕಾರವನ್ನು ಕಳುಹಿಸಿ ಪ್ರಜೆಗಳ ಸಮಸ್ಯೆಗಳಿಗೆ ಶೀಘ್ರ ಸ್ಪಂದಿಸಿ ಸ್ಥಳದಲ್ಲಿಯೇ ಪರಿಹಾರ ಒದಗಿಸಲು; ಸಾರ್ವಜನಿಕ ಕುಂದು ಕೊರತೆಗಳ ಸಭೆ ಸಹಕಾರಿಯಾಗಲಿದ್ದು, ಜನಸ್ಪಂದನ ಸಭೆಗಳಲ್ಲಿ ಸಾರ್ವಜನಿಕರು ಸಲ್ಲಿಸುವ ಅರ್ಜಿಗಳನ್ನು ತ್ವರಿತವಾಗಿ ವಿಲೇವಾರಿ ಮಾಡಿ ಶೀಘ್ರ ಬಗೆಹರಿಸಲಾಗುವುದು ಎಂದು ಆಹಾರ, ನಾಗರಿಕ ಸರಬರಾಜು ಮತ್ತು ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಕೆ.ಹೆಚ್ ಮುನಿಯಪ್ಪ ಹೇಳಿದ್ದಾರೆ. ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೇವನಹಳ್ಳಿಯಲ್ಲಿ ನಡೆದ ಸಾರ್ವಜನಿಕ ಕುಂದು ಕೊರತೆ ಸಭೆಯಲ್ಲಿ ಅವರು ಮಾತನಾಡಿದರು.

<><><>

**ಮಹರ್ಷಿ ವಾಲ್ಮೀಕಿ ಅಭಿವೃದ್ಧಿ ನಿಗಮದ ಹಗರಣವನ್ನು ರಾಜ್ಯ ಸರ್ಕಾರ ಮುಚ್ಚಿಹಾಕುವ** ಪ್ರಯತ್ನ ನಡೆಸುತ್ತಿದ್ದು, ಈ ಬಗ್ಗೆ ಬಿಜೆಪಿ ಹೋರಾಟ ನಡೆಸಲಿದೆ ಎಂದು ವಿಧಾನಸಭೆ ವಿಪಕ್ಷ ನಾಯಕ ಆರ್.ಅಶೋಕ ಬೆಂಗಳೂರಿನಲ್ಲಿ ನಿನ್ನೆ ಹೇಳಿದ್ದಾರೆ. ಈ ಸಂಬಂಧ ವಿಧಾನಸಭೆ ಒಳಗೆ ಮತ್ತು ಹೊರಗೆ ಜನರ ಪರವಾಗಿ ಹೋರಾಟ ಮಾಡಲಾಗುವುದು. ತಪ್ಪಿತಸ್ಥರಿಗೆ ಶಿಕ್ಷೆ ಆಗುವ ತನಕ ನಮ್ಮ ಹೋರಾಟ ನಡೆಯಲಿದೆ ಎಂದರು.

<><><>

**ದೇಶದಲ್ಲಿ ಹಸಿರು ಇಂಧನ ಗುರಿ ಸಾಧನೆಗೆ ಕೇಂದ್ರ ಸರ್ಕಾರ ಹಲವು ಹೊಸ** ಕಾರ್ಯಯೋಜನೆಗಳನ್ನು ರೂಪಿಸುತ್ತಿದೆ ಎಂದು ಕೇಂದ್ರ ಆಹಾರ, ಗ್ರಾಹಕ ವ್ಯವಹಾರಗಳ ಖಾತೆ ಸಚಿವ ಪ್ರಲ್ಹಾದ ಜೋಶಿ ತಿಳಿಸಿದ್ದಾರೆ. ದೊಡ್ಡಬಳ್ಳಾಪುರದಲ್ಲಿ ಗ್ರೀನ್ ಹೈಡ್ರೋಜನ್ ಎಲೆಕ್ಟ್ರೋ ಲೈಝರ್ ಗಿಗಾ ಫ್ಯಾಕ್ಟರಿ ಉದ್ಘಾಟಿಸಿ ಮಾತನಾಡಿದ ಅವರು, 2014ರಲ್ಲಿ, 76 ಗಿಗಾ ವ್ಯಾಟ್‌ನಿಂದ ನವೀಕರಿಸಬಹುದಾದ ಇಂಧನ ಸಾಮರ್ಥ್ಯ, ಪ್ರಸ್ತುತ 2 ಪಟ್ಟು ಹೆಚ್ಚಾಗಿದೆ ಎಂದು ತಿಳಿಸಿದರು. 2014ರಲ್ಲಿ, 3 ಗಿಗಾ ವ್ಯಾಟ್ ಸೌರಶಕ್ತಿ ಉತ್ಪಾದನಾ ಸಾಮರ್ಥ್ಯ ಹೊಂದಲಾಗಿತ್ತು. ಆದರೆ ಈಗ 85 ಗಿಗಾ ವ್ಯಾಟ್ ಸೌರಶಕ್ತಿ ಉತ್ಪಾದನೆಯಾಗುತ್ತಿದೆ. ಹಸಿರು ಇಂಧನ ಬೆಳವಣಿಗೆಯಲ್ಲಿ ಭಾರತಕ್ಕೆ ಅಪಾರ ಅವಕಾಶಗಳಿವೆ ಎಂದು ಹೇಳಿದರು.

<><><>

**ಇದೇ ಸಂದರ್ಭದಲ್ಲಿ ಬೃಹತ್ ಕೈಗಾರಿಕಾ ಖಾತೆ ಸಚಿವ ಎಂ.ಬಿ.ಪಾಟೀಲ್ ಮಾತನಾಡಿ,** ಮರುಬಳಕೆ ಇಂಧನ ಉತ್ಪಾದನೆಯಲ್ಲಿ ಕರ್ನಾಟಕ ಪ್ರಮುಖ ಪಾತ್ರ ವಹಿಸಿದ್ದು, Ohmium ಓಮಿಯಂ ಕಂಪನಿಯು ಎರಡು ಸಾವಿರ ಕೋಟಿ ರೂಪಾಯಿ ಹೂಡಿಕೆ ಮಾಡಿದೆ. ವಾರ್ಷಿಕ 500 ಮೆಗಾವ್ಯಾಟ್ ಹಸಿರು ಇಂಧನ ಉತ್ಪಾದನೆ ಮಾಡಲಿದೆ ಎಂದು ಹೇಳಿದರು.

<><><>

**ಸಂಕ್ಷಿಪ್ತ ಸುದ್ದಿ**

<><><>

**ರಾಷ್ಟ್ರೀಯ ಪರೀಕ್ಷಾ ಸಂಸ್ಥೆ– NTA ತನ್ನ ವೆಬ್‌ಸೈಟ್‌ನಲ್ಲಿ NEET-UG 2024 ರ ಫಲಿತಾಂಶವನ್ನು ನಿನ್ನೆ ಪ್ರಕಟಿಸಿದೆ.**

<><><>

**ಬರುವ ಜುಲೈ 26ರಿಂದ, ಆಗಸ್ಟ್ 11ರವರೆಗೆ, ಪ್ಯಾರೀಸ್‌ನಲ್ಲಿ ಒಲಂಪಿಕ್ ಕ್ರೀಡಾಕೂಟ** ನಡೆಯಲಿದ್ದು, ಭಾರತವನ್ನು ಪ್ರತಿನಿಧಿಸುತ್ತಿರುವ ರಾಜ್ಯದ ಒಂಬತ್ತು ಮಂದಿ ಕ್ರೀಡಾಪಟುಗಳಿಗೆ ತಲಾ 5 ಲಕ್ಷ ರೂಪಾಯಿ ಪ್ರೋತ್ಸಾಹಧನ ಘೋ ‘ಣೆ ಮಾಡುತ್ತಿದ್ದೇನೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.

<><><>